# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 17/07/2021 ರಂದು ಬೆಳಿಗ್ಗೆ 11.30 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಿಂಗಸಂದ್ರ ವಾರ್ಡ್ ಸಂಖ್ಯೆ-191 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ಪ್ರಸನ್ನಕುಮಾರ.ವಿ. ಉಪ-ಆಯುಕ್ತರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಎ.ಪಿ.ಶಿವಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-191, ಸಿಂಗಸಂದ್ರ ರವರು ಸಭೆಗೆ ಹಾಜರಾಗಿರುವ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

ಹಿಂದಿನ ಸಭೆಯ ನಡಾವಳಿಗಳನ್ನು ಸಭೆಯಲ್ಲಿ ಮಂಡಿಸಿ ಸಂಬಂಧಪಟ್ಟ ಅಧಿಕಾರಿಗಳಿಂದ ಹಿಂದಿನ ಸಭೆಯ ನಡಾವಳಿಗಳ ಪಾಲನೆಯ ಬಗ್ಗೆ ಮಾಹಿತಿ ಪಡೆಯಲಾಯಿತು. ಅದರಂತೆ ಇಂದಿನ ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು ಈ ಕೆಳಕಂಡಂತಿರುತ್ತದೆ.

1.ಕೋವಿಡ್-19 ಮಹಾಮಾರಿ ಸಾಂಕ್ರಮಿಕರೋಗ ಹರಡದಂತೆ ಮುಂಜಾಗ್ರತಕ್ರಮ ಕೈಗೊಳ್ಳಲು ತೆಗೆದುಕೊಳ್ಳಬಹುದಾದ ಕ್ರಮಗಳು.

2.ವಿಪತ್ತು ನಿರ್ವಹಣಾ ಸಮಿತಿ(ಡಿಸಾಸ್ಟರ್ ಮ್ಯಾನೇಜಮೆಂಟ್‌ಕಮಿಟಿ) ನಿರ್ವಹಿಸಬೇಕಾದ ಕ್ರಮಗಳ ಬಗ್ಗೆ.

3.ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.

4.ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು,

5.ಮಳೆಯಿಂದ ಸಂಭವಿಸಿದ/ ಸಂಭವಿಸಬಹುದಾದ ಅನಾಹುತಗಳ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು,

6.BWSSB Project ಮತ್ತು ನಿರ್ವಹಣೆಯ ಬಗ್ಗೆ ಚರ್ಚಿಸುವುದು,

7.ಕುಡಿಯುವನೀರು ಸರಬರಾಜು ಬಗ್ಗೆಚರ್ಚಿಸುವುದು,

8.ಗೇಲ್‌ಗ್ಯಾಸ್ ಪೈಪ್ ಲೈನ್ ನಿರ್ವಹಣೆಯ ಬಗ್ಗೆ ಚರ್ಚಿಸುವುದು,

ಸಭೆಯ ನಡಾವಳಿಗಳು

1. 110 ಹಳ್ಳಿಗಳ ಸಮಗ್ರ ಅಭಿವೃದ್ಧಿಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಹೊಸದಾಗಿ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಗೆ ಪೈಪ್‌ಲೈನ್ ಗಳನ್ನು ಹಾಕಲಾಗುತ್ತಿದ್ದು,ಸದರಿ ರಸ್ತೆಯನ್ನು ಅಗೆಯಲಾಗಿರುತ್ತದೆ, ಹಾಗೂ ಸದರಿ ಅಗೆದಿರುವ ಮಣ್ಣನ್ನು ತೆಗೆದು ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಸಹಾಯಕ ಅಭಿಯಂತರರು ಮತ್ತು ಎಲ್& ಟಿ ಗುತ್ತಿಗೆದಾರರಿಗೆ ಸೂಚಿಸಲಾಯಿತು.

2. 110 ಹಳ್ಳಿಗಳ ಸಮಗ್ರ ಅಭಿವೃದ್ಧಿಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಹೊಸದಾಗಿ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಗೆ ಪೈಪ್‌ಲೈನ್ ಗಳನ್ನು ಹಾಕಲಾಗುತ್ತಿದ್ದು,ಸದರಿ ರಸ್ತೆಯನ್ನು ಅಗೆಯಲಾಗುತ್ತಿದ್ದು, ಸದರಿ ರಸ್ತೆಗಳಲ್ಲಿ ಹಾಲಿ ಹಾಕಿರುವ ಯು.ಜಿ ಕೇಬಲ್ ವೈರ್‌ಗಳು ಮತ್ತು ಗೇಲ್‌ಗ್ಯಾಸ್ ಕೊಳವೆ ಮಾರ್ಗಗಳಿಗೆ ತೊಂದರೆಯಾಗದಂತೆ ಕಾಮಗಾರಿಯನ್ನು ನಿರ್ವಹಿಸಲು ಸದರಿ ಎಲ್& ಟಿ ಗುತ್ತಿಗೆದಾರರಿಗೆ ವಾರ್ಡ್ ನಲ್ಲಿ ಕೆಲಸ ನಿರ್ವಹಿಸಲು ಸೂಚಿಸಿದರು.

3. ಕೂಡ್ಲು ಗ್ರಾಮದಲ್ಲಿ ಸ್ಯಾನಿಟರಿ ಗಾಡಿ ಸರಿಯಾಗಿ ಬರುತ್ತಿಲ್ಲವೆಂದು ಸಾರ್ವಜನಿಕರು ದೂರನ್ನು ನೀಡಿರುತ್ತಾರೆ, ಸರಿಯಾದ ಸಮಯಕ್ಕೆ ಸ್ಯಾನಿಟರಿ ಗಾಡಿ ಕಳಿಸಬೇಕು ಎಂದು ನೋಡಲ್ ಅಧಿಕಾರಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಯಾದ ಶ್ರೀ ಉಮೇಶ್ ರವರಿಗೆ ಮತ್ತು ಶ್ರೀ ಸಾಯಿಬಣ್ಣ ರವರಿಗೆ ದೂರವಾಣಿ ಕರೆ ಮಾಡಿ ಸೂಚಿಸಿದರು.

4. ಬಿ.ಡಬ್ಲ್ಯೂ.ಎಸ್.ಎಸ್.ಬಿ 110 ಹಳ್ಳಿಗಳ ಅಭಿವೃದ್ಧಿಗಾಗಿ ಕೂಡ್ಲು ಗ್ರಾಮದಲ್ಲಿ ರಸ್ತೆಯನ್ನು ಅಗೆಯುತ್ತಿದ್ದು, ಸದರಿ ಮಣ್ಣನ್ನು ರಸ್ತೆಯ ಮೇಲೆಯೇ ಹಾಗೆ ಬಿಡುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತದೆ. ಅದನ್ನು ಪೂರ್ಣವಾಗಿ ರಸ್ತೆ ಅಗೆದ ತಕ್ಷಣ ಆ ಮಣ್ಣನ್ನು ತುರ್ತಾಗಿ ತೆರವುಗೊಳಿಸಬೇಕೆಂದು ನೋಡಲ್ ಅಧಿಕಾರಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

5. ಸಿಂಗಸಂದ್ರ ವಾರ್ಡ್ ವ್ಯಾಪ್ತಿಯಲ್ಲಿ ಜನಸಂಖ್ಯೆ ಹೆಚ್ಚಾಗಿದ್ದು, ಸಾರ್ವಜನಿಕರಿಗೆ ವ್ಯಾಕ್ಸಿನೇಷನ್ ಅತ್ಯವಶ್ಯಕವಾಗಿದ್ದು, ಇಲ್ಲಿ ಬೀದಿಬದಿ ವ್ಯಾಪಾರಿಗಳು, ಗಾರ್ಮೆಂಟ್ಸ್ ನಲ್ಲಿ ಕೆಲಸ ಮಾಡುವವರು, ಕೂಲಿ ಕಾರ್ಮಿಕರು, ಮನೆಕೆಲಸ ಮಾಡುವವರು ಇನ್ನಿತರರು ದಿನಾಲು ವ್ಯಾಕ್ಸಿನೇಷನ್ ಕೇಳಿಕೊಂಡು ಬರುತ್ತಿದ್ದು, ನಮ್ಮ ವಾರ್ಡಿಗೆ ಹೆಚ್ಚಿನ ಪ್ರಮಾಣದಲ್ಲಿ ವ್ಯಾಕ್ಸಿನೇಷನ್ ನೀಡಬೇಕೆಂದು ನೋಡಲ್ ಅಧಿಕಾರಿಗಳು ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಡಾ॥ ನವೀನ್ ರವರಿಗೆ ಸೂಚನೆ ನೀಡಿದರು.

6. ಮುಂದಿನ ವಾರ್ಡ್ ಕಮಿಟಿ ಮೀಟಿಂಗ್‌ಗೆ ಸಂಬಂಧಪಟ್ಟವರು ಗೈರುಹಾಜರಾದರೆ ಅವರ ಬಗ್ಗೆ ಮೇಲಾಧಿಕಾರಿಗೆ ಪತ್ರ ಬರೆಯಲು ಸಹಾಯಕ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ವಾರ್ಡ್ ಕಮಿಟಿ ಸಭೆಯಲ್ಲಿ ತಿಳಿಸಿದರು. ಮತ್ತು ಗೈರು ಹಾಜರಾಗಿರಲು ಕಾರಣ ನೀಡಬೇಕೆಂದು ತಿಳಿಸಿದರು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ –191 ಸಿಂಗಸಂದ್ರ

17/7/21

ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ 191, ಸಿಂಗಸಂದ್ರ

**ಪ್ರತಿಗಳು:–**

1) ಮಾನ್ಯ ಆಡಳಿತಗಾರರು, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
2) ಮಾನ್ಯ ಆಯುಕ್ತರು, ಬೃ.ಬೆಂ.ಮ.ಪಾಲಿಕೆ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
3) ಮಾನ್ಯ ಶಾಸಕರು, ಬೊಮ್ಮನಹಳ್ಳಿ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
4) ಮಾನ್ಯ ಶಾಸಕರು, ಬೆಂಗಳೂರು ದಕ್ಷಿಣ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
5) ಮಾನ್ಯ ಶಾಸಕರು, ಆನೇಕಲ್ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
6) ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ
7) ಜಂಟಿ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಆವಗಾಹನೆಗೆ ಮಂಡಿಸಿದೆ.
8) ಉಪ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಆವಗಾಹನೆಗೆ ಮಂಡಿಸಿದೆ
9) ಮುಖ್ಯ ಅಭಿಯಂತರರು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ
10ಆರೋಗ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ
11) ಅರಣ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ
12) ಡಿ.ಜಿ.ಎಂ. ಗೇಲ್‌ಗ್ಯಾಸ್‌ರವರಿಗೆ ಮುಂದಿನ ಕ್ರಮಕ್ಕಾಗಿ,
13) ಮುಖ್ಯಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರ ಅವಗಾಹನೆಗೆ ಕಳುಹಿಸಿದೆ
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕಾಗಿ

15) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಎಂ.ಆರ್.ಸಿ.ಎಲ್ ರವರಿಗೆ ಮುಂದಿನ ಕ್ರಮಕ್ಕಾಗಿ

16) ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಬೃ.ಬೆಂ.ಮ.ಪಾ. ರವರಿಗೆ ಮುಂದಿನ ಕ್ರಮಕ್ಕಾಗಿ

17) ಪಿ.ಎಸ್.ಐ. ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ. ಪರಪ್ಪನಅಗ್ರಹಾರಠಾಣೆ.

18) ಕಂದಾಯಅಧಿಕಾರಿ (ಬೇಗೂರು) ವಲಯರವರ ಅವಗಾಹನೆಗೆ ಮಂಡಿಸಿದೆ

19) ಪಾರ್ಕ ಸಮಿತಿ ಸದಸ್ಯರುರವರಿಗೆ ಕಳುಹಿಸಲಾಗಿದೆ.

20) ಕಛೇರಿಕಡತಕ್ಕೆ